# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1240 |
| ಮಾನ್ಯ ಸದಸ್ಯರ ಹೆಸರು | ಶ್ರೀ ಸುನೀಲ್‌ಗೌಡ ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದವರು | ಮಾನ್ಯ ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 19-12-2024. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಬೇರೆ ರಾಜ್ಯಗಳಿಂದ ಅಕ್ರಮವಾಗಿ ವಿಜಯಪುರ ಜಿಲ್ಲೆಗೆ ಮದ್ಯ ಸರಬರಾಜು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗೂ ವಿಜಯಪುರ ಜಿಲ್ಲೆಯಲ್ಲಿ ಕಿರಾಣಿ ಅಂಗಡಿಗಳಲ್ಲಿ ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಇದನ್ನು ತಡೆಗಟ್ಟಲು ಕೈಗೊಂಡ ಕ್ರಮಗಳೇನು; | ವಿಜಯಪುರ ಜಿಲ್ಲೆಯು ಮಹಾರಾಷ್ಟ್ರ ರಾಜ್ಯಕ್ಕೆ ಹೊಂದಿಕೊಂಡಿರುವ ಗಡಿ ಜಿಲ್ಲೆಯಾಗಿದ್ದು, ಹೊರ ರಾಜ್ಯದ ಮದ್ಯವು ಜಿಲ್ಲೆಗೆ ಕಳ್ಳಸಾಗಾಣಿಕೆ ಮೂಲಕ ಸರಬರಾಜು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ವಿಜಯಪುರ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ 03 ವರ್ಷಗಳಲ್ಲಿ ಹೊರ ರಾಜ್ಯಗಳಿಂದ ಅಕ್ರಮವಾಗಿ ಮದ್ಯ ಸರಬರಾಜು ಮಾಡುತ್ತಿರುವವರ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ ಅನ್ವಯ 35 ಘೋರ ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ. ಹೀಗೆ ದಾಖಲಿಸಲಾದ ಪ್ರಕರಣಗಳಲ್ಲಿ ಭಾಗಿಯಾದ 34 ಆರೋಪಿತರನ್ನು ದಸ್ತಗಿರಿಗೊಳಪಡಿಸಿ, ಒಟ್ಟು 808 ಲೀಟರ್ ಹೊರ ರಾಜ್ಯದ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ. |

| ಅಬಕಾರಿ ಸಾಲು (ಜುಲೈ ರಿಂದ ಜೂನ್ ಮಾಹೆವರೆಗೆ) | ದಾಖಲಿಸಿದ ಘೋರ ಪ್ರಕರಣಗಳ ಸಂಖ್ಯೆ | ದಸ್ತಗಿರಿಗೊಳಪಡಿಸಿದ ಆರೋಪಿಗಳ ಸಂಖ್ಯೆ | ವಶಪಡಿಸಿಕೊಂಡ ಹೊರ ರಾಜ್ಯದ ಮದ್ಯ (ಲೀ) |
|---|---|---|---|
| 2022-23 | 15 | 14 | 515 |
| 2023-24 | 16 | 16 | 246 |
| 2024-25 (ಜುಲೈ ರಿಂದ ನವೆಂಬರ್ ಮಾಹೆಯ ಅಂತ್ಯದವರೆಗೆ) | 04 | 04 | 47 |
| ಒಟ್ಟು | 35 | 34 | 808 |

ವಿಜಯಪುರ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಕೆಲವು ವ್ಯಕ್ತಿಗಳು

| | | |
|---|---|---|
| | | ಸ್ವಲಾಭಕ್ಕಾಗಿ ಅನಧಿಕೃತ ಸ್ಥಳಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದಿರುತ್ತದೆ.<br><br>ಅಕ್ರಮವಾಗಿ ಮದ್ಯ ಮಾರಾಟ ಮಾಡುವುದನ್ನು ತಡೆಗಟ್ಟಲು ವಲಯ ವ್ಯಾಪ್ತಿಯ ರೂಟ್‌ಗಳಲ್ಲಿ ನಿರಂತರವಾಗಿ ಗಸ್ತು ನಡೆಸಲಾಗುತ್ತಿದೆ. ಸದರಿ ಗಸ್ತಿನ ಸಮಯದಲ್ಲಿ ಮತ್ತು ದೂರು ಸ್ವೀಕೃತವಾದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಸ್ಥಳಗಳ ಮೇಲೆ ದಾಳಿ ನಡೆಸಿ ಅಕ್ರಮಗಳು ಕಂಡುಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಹತ್ತಿಕಲು ಕ್ರಮವಹಿಸುವ ಕುರಿತು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳೊಂದಿಗೆ ಜಂಟಿ ಕಾರ್ಯಚರಣೆ ನಡೆಸಲಾಗುತ್ತಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 50 ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ತಿಳುವಳಿಕೆ ಪತ್ರ ಜಾರಿಗೊಳಿಸಲಾಗಿರುತ್ತದೆ. ಅಕ್ರಮ ಮದ್ಯ ಮಾರಾಟಗಾರರ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ ಅನ್ವಯ ಮೊಕದ್ದಮೆ ದಾಖಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ. | ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವವರ ಜೊತೆಗೆ ಕೆಲವೊಂದು ಪೊಲೀಸ್ ಅಧಿಕಾರಿಗಳು ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಅಂತಹ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; (ವಿವರ ನೀಡಿ) | ಬಂದಿರುವುದಿಲ್ಲ.<br><br>ಆದುದರಿಂದ ಅಧಿಕಾರಿಗಳ ವಿರುದ್ಧ ಯಾವುದೇ ಕ್ರಮ ಜರುಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |

| | | |
|---|---|---|
| ಇ. | ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುವುದನ್ನು ತಡೆಗಟ್ಟಲು ಸರ್ಕಾರ ಯಾವ ಕಠಿಣ ಕ್ರಮಗಳನ್ನು ಕೈಗೊಂಡಿದೆ? | ರಾಜ್ಯ ವ್ಯಾಪ್ತಿಯಲ್ಲಿ ಅಕ್ರಮವಾಗಿ ಮದ್ಯ ಮಾರಾಟದ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ ಅನ್ವಯ ಕಳೆದ ಮೂರು ವರ್ಷಗಳಲ್ಲಿ ಒಟ್ಟು 5751 ದಾಳಿಗಳನ್ನು ನಡೆಸಿ, 4437 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ. ಹೀಗೆ ದಾಖಲಿಸಲಾದ ಪ್ರಕರಣಗಳಲ್ಲಿ ಭಾಗಿಯಾದ 5021 ಆರೋಪಿತರನ್ನು ದಸ್ತಗಿರಿಗೊಳಪಡಿಸಲಾಗಿರುತ್ತದೆ. ವರ್ಷವಾರು ವಿವರ ಈ ಕೆಳಕಂಡಂತೆ. |

| ಅಬಕಾರಿ ಸಾಲು (ಜುಲೈ ರಿಂದ ಜೂನ್ ಮಾಹೆವರೆಗೆ) | ನಡೆಸಿದ ದಾಳಿಗಳ ಸಂಖ್ಯೆ | ದಾಖಲಿಸಿದ ಪ್ರಕರಣಗಳು | | | ದಸ್ತಗಿರಿಗೊಳಪಡಿಸಿದ ಆರೋಪಿಗಳ ಸಂಖ್ಯೆ |
|---|---|---|---|---|---|
| | | ಕ.ಅ. ಕಾಯ್ದೆ 1965 ಕಲಂ 32, 34 | ಕ.ಅ. ಕಾಯ್ದೆ 1965 ರ ಕಲಂ 15(ಎ) | ಒಟ್ಟು | |
| 2021-22 | 1556 | 147 | 814 | 961 | 1048 |
| 2022-23 | 2186 | 256 | 1736 | 1992 | 2431 |
| 2023-24 | 2009 | 203 | 1281 | 1484 | 1542 |
| ಒಟ್ಟು | 5751 | 606 | 3831 | 4437 | 5021 |

ಆಇ 110 ಇಎಲ್‌ಕ್ಯೂ 2024

(ಆರ್.ಬಿ. ತಿಮ್ಮಾಪುರ)
ಅಬಕಾರಿ ಸಚಿವರು